**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ ಇವರ ನಿಯಮ-72 ರ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ಪ್ರಶ್ನೆ :-** ಮಂಗಳೂರು ನಗರದಲ್ಲಿ ಜಿಲ್ಲಾ ಕಾರಾಗೃಹವು ಅವ್ಯವಸ್ಥೆಗಳ ಗೂಡಾಗಿದ್ದು, ದಿನಂಪ್ರತಿ ಒಂದಲ್ಲ ಒಂದು ಅಹಿತಕರ ಘಟನೆಗಳು ನಡೆಯುತ್ತಿದ್ದು, ಅಲ್ಲದೇ ಜಿಲ್ಲಾ ಕಾರಾಗೃಹವನ್ನು ಬಾಳೆಪುಣೆಗೆ ವರ್ಗಾಯಿಸಲು ಕೈಗೊಂಡಿರುವ ಕ್ರಮ ಮತ್ತು ಕಾರಾಗೃಹದಲ್ಲಿ ನಡೆಯುತ್ತಿರುವ ಅಕ್ರಮಗಳ ಬಗ್ಗೆ ಮತ್ತು ಕೈಗೊಳ್ಳಬಹುದಾದ ಕ್ರಮಗಳ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ :-** ಮಂಗಳೂರು ಜಿಲ್ಲಾ ಕಾರಾಗೃಹವನ್ನು ಬಂಟ್ವಾಳ ತಾಲ್ಲೂಕು ಚೇಳೂರು ಮತ್ತು ಕುರ್ನಾಡು ಗ್ರಾಮಕ್ಕೆ ವರ್ಗಾಯಿಸಲು ಈ ಕೆಳಕಂಡಂತೆ ಕ್ರಮವಹಿಸಲಾಗಿದೆ:-

- ಮಂಗಳೂರು ಜಿಲ್ಲಾ ಕಾರಾಗೃಹದಲ್ಲಿ ಕುಖ್ಯಾತ ಮತ್ತು ಭೂಗತ ಜಗತ್ತಿನ ಜೊತೆ ಸಂಪರ್ಕ ಹೊಂದಿರುವ ಹಲವಾರು ಬಂದಿಗಳು ದಾಖಲಾಗುತ್ತಿದ್ದು, ಸದರಿ ಕಾರಾಗೃಹವನ್ನು ಅತಿ ಸೂಕ್ಷ್ಮ ಕಾರಾಗೃಹವೆಂದು ಪರಿಗಣಿಸಲಾಗಿರುವುದರಿಂದ, ಮಂಗಳೂರಿನ ಬಂಟ್ವಾಳ ತಾಲ್ಲೂಕು ಚೇಳೂರು ಮತ್ತು ಕುರ್ನಾಡು ಗ್ರಾಮದಲ್ಲಿ 1009 ಬಂದಿಗಳ ಸಾಮರ್ಥ್ಯದ ನೂತನ ಕೇಂದ್ರ ಕಾರಾಗೃಹ ನಿರ್ಮಿಸುವ ಸಂಬಂಧ ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 214 ಪಿಆರ್‌ಎ 2018 ದಿನಾಂಕ:01-03-2019 ರನ್ವಯ, ರೂ.110.00 ಕೋಟಿ ಅನುದಾನಕ್ಕೆ ಆಡಳಿತಾತ್ಮಕ ಮಂಜೂರಾತಿ ನೀಡಿ, ಸದರಿ ರೂ.110.00 ಕೋಟಿಗಳ ಪೂರ್ಣ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ. ಸದರಿ ಕಾಮಗಾರಿಯನ್ನು ಲೋಕೋಪಯೋಗಿ ಇಲಾಖೆ, ಮಂಗಳೂರು ವಿಭಾಗರವರಿಂದ ಮೊದಲನೇ ಹಂತದ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ.

- ಪ್ರಸ್ತುತ, ಮಂಗಳೂರು ನೂತನ ಕೇಂದ್ರ ಕಾರಾಗೃಹದ ಮೊದಲನೇ ಹಂತದ ಕಾಮಗಾರಿಗಳು ಪೂರ್ಣಗೊಂಡಿದ್ದು, ಲೋಕೋಪಯೋಗಿ ಇಲಾಖೆ, ಮಂಗಳೂರು ವಿಭಾಗ ಇವರು 2ನೇ ಹಂತದ ಕಾಮಗಾರಿಗಳಿಗೆ ರೂ.195.00 ಕೋಟಿಗಳ ಅಂದಾಜು ಪಟ್ಟಿಯನ್ನು ಸಲ್ಲಿಸಿರುತ್ತಾರೆ.

**ಮಂಗಳೂರು ಜಿಲ್ಲಾ ಕಾರಾಗೃಹದಲ್ಲಿ ಬಂದಿಗಳು ನಿಷೇಧಿತ ವಸ್ತುಗಳ ಬಳಕೆಯನ್ನು ಮಾಡದಂತೆ ಹಾಗೂ ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗದಂತೆ ತಡೆಗಟ್ಟುವ ನಿಟ್ಟಿನಲ್ಲಿ, ಈಗಾಗಲೇ ತೆಗೆದುಕೊಂಡ ಅಗತ್ಯ ಕ್ರಮಗಳ ವಿವರಗಳು ಈ ಕೆಳಕಂಡಂತಿರುತ್ತದೆ:-**

- ಮಂಗಳೂರು ಜಿಲ್ಲಾ ಕಾರಾಗೃಹದಲ್ಲಿ ಕೆ.ಎಸ್.ಐ.ಎಸ್.ಎಫ್. ಸಿಬ್ಬಂದಿಗಳನ್ನು ಕಾರಾಗೃಹದ ಮುಖ್ಯದ್ವಾರದಲ್ಲಿ ಹಾಗೂ ಹೊರ ವೃತ್ತದ ವಿಭಾಗಗಳಲ್ಲಿ ಭದ್ರತೆ ತಪಾಸಣೆ ಹಾಗೂ ಗಸ್ತು ನಿರ್ವಹಣೆ ಕರ್ತವ್ಯಕ್ಕೆ ನಿಯೋಜಿಸಲಾಗಿರುತ್ತದೆ. ಕಾರಾಗೃಹಕ್ಕೆ ಆಗಮಿಸುವ ಮತ್ತು ನಿರ್ಗಮಿಸುವ ಸಿಬ್ಬಂದಿ /ವ್ಯಕ್ತಿಗಳನ್ನು ಭದ್ರತಾ ಉಪಕರಣಗಳು ಮತ್ತು ಬ್ಯಾಗೇಜ್ ಸ್ಕ್ಯಾನರ್ ಮೂಲಕ ಹಾಗೂ ಸಿಬ್ಬಂದಿಗಳಿಂದ ಭೌತಿಕವಾಗಿ ತಪಾಸಣೆಯನ್ನು ಕೈಗೊಳ್ಳಲಾಗುತ್ತಿದೆ.

..2....

- ಕಾರಾಗೃಹದ ಅಧಿಕಾರಿ/ಸಿಬ್ಬಂದಿಗಳ ನೇತೃತ್ವದಲ್ಲಿ ತಂಡಗಳನ್ನು ರಚಿಸಿ ಪ್ರತಿನಿತ್ಯ ಬಂದಿಗಳನ್ನು ಹಾಗೂ ಬಂದಿಗಳ ಕೊಠಡಿಗಳನ್ನು ಅನಿರೀಕ್ಷಿತವಾಗಿ ತಪಾಸಣೆಗೆ ಒಳಪಡಿಸಲಾಗುತ್ತಿದೆ.

- ಪೊಲೀಸ್ ಇಲಾಖೆ ಮತ್ತು ಕಾರಾಗೃಹ ಇಲಾಖೆಯ ಸಹಯೋಗದಲ್ಲಿ ಕಾರಾಗೃಹದ ಬಂದಿಗಳನ್ನು ಹಾಗೂ ಬಂದಿಗಳ ಕೊಠಡಿಗಳನ್ನು ಅನಿರೀಕ್ಷಿತವಾಗಿ ತಪಾಸಣೆ ಕೈಗೊಳ್ಳಲಾಗುತ್ತಿದೆ.

- ಭದ್ರತಾ ಉಪಕರಣಗಳಾದ Deep Search Metal Detector, HHMD, FG-1 Security Pole, DFMD and Body Worn Cameras ಗಳನ್ನು ಒದಗಿಸಿದ್ದು, ಸದರಿ ಉಪಕರಣಗಳಿಂದ ಕಾರಾಗೃಹಗಳಲ್ಲಿ ಬಳಸಿ ತಪಾಸಣೆ ಕೈಗೊಳ್ಳಲಾಗುತ್ತಿದೆ.

- ರಾಜ್ಯದ ಕಾರಾಗೃಹಗಳಲ್ಲಿ ಬಂದಿಗಳ ತಪಾಸಣೆ ಸಮಯದಲ್ಲಿ ಮೊಬೈಲ್ ಮತ್ತು ಇನ್ನಿತರ ನಿಷೇಧಿತ ವಸ್ತುಗಳು ಕಂಡುಬಂದಲ್ಲಿ ಅಂತಹವರ ವಿರುದ್ಧ ಕರ್ನಾಟಕ ಬಂದೀಖಾನೆಗಳ (ತಿದ್ದುಪಡಿ) ಅಧಿನಿಯಮ, 2022 ಕಲಂ 42 ರನ್ವಯ ಮೂರು ವರ್ಷಗಳಿಗೆ ಕಡಿಮೆ ಇಲ್ಲದ ಮತ್ತು ಐದು ವರ್ಷಗಳವರೆಗೆ ಶಿಕ್ಷೆ ಮತ್ತು ದಂಡನೆಗೆ ಒಳಪಡಿಸಲಾಗುತ್ತಿದೆ.

- ಮಂಗಳೂರು ಜಿಲ್ಲಾ ಕಾರಾಗೃಹದಲ್ಲಿ ದಿನಾಂಕ: 05.04.2022 ರಿಂದ ದಿನಾಂಕ: 06.03.2025 ರವರೆಗೆ ಒಟ್ಟು 9 ಪ್ರಕರಣಗಳನ್ನು ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ದಾಖಲಿಸಲಾಗಿರುತ್ತದೆ.

- ಮಂಗಳೂರು ಕಾರಾಗೃಹದಲ್ಲಿ ಅಳವಡಿಸಲಾಗಿರುವ 5 ಸಂಖ್ಯೆ ಮೊಬೈಲ್ ಜಾಮರ್‌ಗಳನ್ನು ದುರಸ್ಥಿ ಮತ್ತು 4ಜಿ/5ಜಿ ಗೆ ಮೇಲ್ದರ್ಜೇಗೇರಿಸಲು ಕ್ರಮ ಕೈಗೊಳ್ಳಲಾಗಿದ್ದು, ಯಾವುದೇ ನೆಟ್‌ವರ್ಕ್ ದೊರೆಯದಂತೆ ಕ್ರಮಕೈಗೊಳ್ಳಲಾಗಿದೆ.

**<u>ಕರ್ತವ್ಯ ಲೋಪವೆಸಗಿರುವ ಅಧಿಕಾರಿ/ಸಿಬ್ಬಂದಿಗಳ ಮೇಲೆ ಈ ಕೆಳಕಂಡಂತೆ ಕ್ರಮವಹಿಸಲಾಗಿರುತ್ತದೆ:-</u>**

- ಮಂಗಳೂರು ಜಿಲ್ಲಾ ಕಾರಾಗೃಹದಲ್ಲಿ ದಿನಾಂಕ: 01-07-2024 ರಂದು ವಿಚಾರಣಾ ಬಂದಿಗಳ ನಡುವೆ ಹಲ್ಲೆ ನಡೆದ ಪ್ರಕರಣದಲ್ಲಿ ಬರ್ಕೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ಸಂಖ್ಯೆ:54/2024ರನ್ವಯ ಪ್ರಥಮ ವರ್ತಮಾನ ವರದಿ ದಾಖಲಾಗಿರುತ್ತದೆ. ಸದರಿ ವಿಷಯದಲ್ಲಿ ಅಧೀಕ್ಷಕರು ಸೇರಿದಂತೆ ಐದು ಜನ ಸಿಬ್ಬಂದಿಗಳ ವಿರುದ್ಧ 1957 ಕೆ.ಸಿ.ಎಸ್.(ಸಿ.ಸಿ.&ಎ) ನಿಯಮಾವಳಿಗಳನ್ವಯ ಜಂಟಿ ಇಲಾಖಾ ಶಿಸ್ತುಕ್ರಮ ಕೈಗೊಳ್ಳಲಾಗುತ್ತಿದೆ.

..3....

- ಮಂಗಳೂರು ಜಿಲ್ಲಾ ಕಾರಾಗೃಹದಲ್ಲಿ ದಿನಾಂಕ:25-07-2024 ರಂದು ಮಂಗಳೂರು ಕಮಿಷನರೇಟ್ ವಿಭಾಗದ ಪೊಲೀಸ್ ಅಧಿಕಾರಿ ಹಾಗೂ ಸಿಬ್ಬಂದಿಗಳ ತಂಡವು ಅನಿರೀಕ್ಷಿತ ತಪಾಸಣೆ ಕೈಗೊಂಡ ಸಂದರ್ಭದಲ್ಲಿ ಕಾರಾಗೃಹದಲ್ಲಿ ನಿಷೇಧಿತ ವಸ್ತುಗಳು ದೊರೆತ ಪ್ರಕರಣಕ್ಕೆ ಸಂಬಂಧಿಸಿದಂತೆ, ಬರ್ಕೆ ಪೊಲೀಸ್ ಠಾಣೆಯಲ್ಲಿ ಸಂಖ್ಯೆ:61/2024 ರನ್ವಯ ಪ್ರಥಮ ವರ್ತಮಾನ ವರದಿ ದಾಖಲಾಗಿರುತ್ತದೆ. ಸದರಿ ವಿಷಯದಲ್ಲಿ ಅಧೀಕ್ಷಕರು ಹಾಗೂ ಜೈಲರ್ ರವರನ್ನು ಅಮಾನತುಗೊಳಿಸಲಾಗಿದೆ.
- ಮಂಗಳೂರು ಜಿಲ್ಲಾ ಕಾರಾಗೃಹದಲ್ಲಿ ನಿಷೇಧಿತ ವಸ್ತುಗಳನ್ನು ಕಾರಾಗೃಹದ ಒಳತರಲು ಸಹಕರಿಸಿದ ಸಿಬ್ಬಂದಿ ವಿರುದ್ಧ ಬರ್ಕೆ ಪೊಲೀಸ್ ಠಾಣೆಯ ಅಪರಾಧ ಸಂಖ್ಯೆ: 125/2024 ರಲ್ಲಿ ಪ್ರಕರಣ ದಾಖಲಾಗಿದ್ದು, ಮಂಗಳೂರು ಜಿಲ್ಲಾ ಕಾರಾಗೃಹದಲ್ಲಿ ನ್ಯಾಯಾಂಗ ಬಂಧನಕ್ಕೆ ಒಳಗಾದ ಹಿನ್ನಲೆಯಲ್ಲಿ ಸದರಿಯವರನ್ನು ಕರ್ತವ್ಯದಿಂದ ನಿಲಂಬನಗೊಳಿಸಿ, ಪ್ರಾಥಮಿಕ ವಿಚಾರಣೆಗೆ ಆದೇಶಿಸಲಾಗಿದೆ.

ಸಂಖ್ಯೆಃ ಹೆಚ್‌ಡಿ 80 ಪಿಆರ್‌ಎ 2025

**(ಡಾ: ಜಿ. ಪರಮೇಶ್ವರ)**
ಗೃಹ ಸಚಿವರು